ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಚಾಮರಾಜನಗರ ಒಳಚರಂಡಿ ಅವ್ಯವಸ್ಥೆ ಬಗ್ಗೆ

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

256 (219) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಾಮರಾಜನಗರ ನಗರಸಭೆ ವ್ಯಾಪ್ತಿಯಲ್ಲಿ ಒಳಚರಂಡಿ ಕಾಮಗಾರಿ ಪೂರ್ಣಗೊಂಡಿದೆಯೇ ; ಇನ್ನೂ ಯಾವ ಯಾವ ಕಾಮಗಾರಿಗಳು ಬಾಕಿ ಇವೆ ; ಈ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ;

(ಆ) ಈಚೆಗೆ ಸುರಿದ ಮಳೆಯಿಂದ ನಗರದ ಬೀದಿಗಳಲ್ಲಿ ಒಳಚರಂಡಿ ಕೊಳಚೆ ನೀರು ಉಕ್ಕಿ ಹರಿದು ನಗರದ ನಾಗರಿಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅವೈಜ್ಞಾನಿಕ ಒಳಚರಂಡಿ ಕಾಮಗಾರಿ ಇದಕ್ಕೆ ಕಾರಣವಾಗಿದೆಯೇ ; ಇದನ್ನು ಸರಿಪಡಿಸಿ, ಒಳಚರಂಡಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ ?